# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು–560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 09.03.2020

## ನೋವೆಲ್ ಕೊರೋನಾ ವೈರೆಸ್(Covid-19) ಬಗ್ಗೆ ಮುಂಗಾಗ್ರತಾ ಕ್ರಮಗಳನ್ನು ಕೈಗೊಳ್ಳಲು ರೆಸಿಡೆಂಟ್ಸ್ ವೆಲ್‌ಫೆರ್ ಅಸೋಸಿಯೇಷನ್ ಜೊತೆ ಸಭೆ:



ನೋವೆಲ್ ಕೊರೋನಾ ವೈರೆಸ್(Covid-19) ಸೋಂಕಿನ ಬಗ್ಗೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಇಂದು ಪೂಜ್ಯ ಮಹಾಪೌರರು ಹಾಗೂ ಮಾನ್ಯ ಆಯುಕ್ತರು ರವರು ನೇತೃತ್ವದಲ್ಲಿ ಇಂದು ಪುಟ್ಟಣ್ಣಚೆಟ್ಟಿ ಪುರಭವನ(ಟೌನ್ ಹಾಲ್)ದಲ್ಲಿ ರೆಸಿಡೆಂಟ್ಸ್ ವೆಲ್‌ಫೆರ್ ಅಸೋಸಿಯೇಷನ್(RWA) ಹಾಗೂ ಆರೋಗ್ಯಾಧಿಕಾರಿಗಳ ಜೊತೆ ಸಭೆ ನಡೆಯಿತು. ಈ ವೇಳೆ ಸಾರ್ವಜನಿಕ ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ಶ್ರೀ ಮಂಜುನಾಥ್ ರಾಜು.ಜಿ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಅಧ್ಯಕ್ಷರು ಶ್ರೀ ಶ್ರೀನಿವಾಸ್.ಎಲ್, ವಿಶೇಷ ಆಯುಕ್ತರು(ಆರೋಗ್ಯ) ಡಾ.ರವಿಕುಮಾರ್ ಸುರಪುರ, ವಿಶೇಷ ಆಯುಕ್ತರು(ಘನತ್ಯಾಜ್ಯ) ಶ್ರೀ ಡಿ.ರಂದೀಪ್, ಮುಖ್ಯ ಆರೋಗ್ಯಾಧಿಕಾರಿ(ಸಾರ್ವಜನಿಕ) ಡಾ. ವಿಜೇಂದ್ರ, ಮುಖ್ಯ ಆರೋಗ್ಯಾಧಿಕಾರಿ(ಕ್ಲಿನಿಕಲ್) ಡಾ. ನಿರ್ಮಲಾ ಬುಗ್ಗಿ, ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕರು ಶ್ರೀ ರಾಮಚಂದ್ರ ಹಾಗೂ ಇತರರು ಉಪಸ್ಥಿತರಿದ್ದರು.

**ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು,** ಕೊರೋನಾ ವೈರೆಸ್ ಸೋಂಕು ಇಡೀ ಜಗತ್ತಿನಾದ್ಯಂತ ತಲ್ಲಣ ಮೂಡಿಸಿದ್ದು, ಎಲ್ಲರಲ್ಲೂ ಭಯದ ವಾತಾವರಣ ಏರ್ಪಟ್ಟಿದೆ. ಅದಕ್ಕಾಗಿ ಕೊರೋನಾ ವೈರೆಸ್ ಸೋಂಕು ಹರಡದಿರಲು ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚಿಸಲು ಇಂದು ಪಾಲಿಕೆ ವತಿಯಿಂದ ರೆಸಿಡೆಂಟ್ಸ್ ವೆಲ್‌ಫೆರ್ ಅಸೋಸಿಯೇಷನ್, ಆರೋಗ್ಯಾಧಿಕಾರಿಗಳ ಜೊತೆ ಸಭೆ ನಡೆಸಲಾಗುತ್ತಿದೆ.

ಕೆಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೆ ಸಾಕು ಈ ಸೋಂಕನ್ನು ತಡೆಯಬಹುದಾಗಿದೆ. ಈ ಸಂಬಂಧ ಹಸ್ತಲಾಗನ ಮಾಡುವ ಬದಲು ನಮಸ್ಕರಿಸುವುದು, ಕೈಯಿಂದ ಮೂಗು, ಬಾಯಿ ಹಾಗೂ ಕಣ್ಣು ಮುಟ್ಟಿಕೊಳ್ಳದಿರುವುದು, ಕೆಮ್ಮುವಾಗ ಬಟ್ಟೆ ಅಡ್ಡ ಇಡುವುದು ಸೇರಿದಂತೆ ಇನ್ನಿತರೆ ಕ್ರಮಗಳನ್ನು ತೆಗೆದುಕೊಂಡರೆ ಸೋಂಕನ್ನು ತಡೆಯಬಹುದಾಗಿದೆ ಎಂದು ತಿಳಿಸಿದರು.

ಸೋಂಕಿನ ಬಗ್ಗೆ ಪಾಲಿಕೆ ಹಾಗೂ ಆರೋಗ್ಯ ಮತ್ತು ಕುಟುಂಬ ಇಲಾಖೆ ವತಿಯಿಂದ ಈಗಾಗಲೇ ಹಲವಾರು ಮುಂಜಾಗೃತಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಪಾಲಿಕೆಯ ಎಲ್ಲಾ ಆಸ್ಪತ್ರೆಗಳಲ್ಲಿ ಮಾಸ್ಕ್, ಸ್ಯಾನಿಟರೈಸ್ ಸೇರಿದಂತೆ ಅವಶ್ಯಕ ಔಷಧಿಗಳನ್ನು ಶೇಖರಿಸಿಟ್ಟುಕೊಳ್ಳಲಾಗಿದೆ. ಅಲ್ಲದೆ ಸಾರ್ವಜನಿಕರ ಮಾಹಿತಿಗಾಗಿ ಹೆಲ್ಪ್ ಡೆಸ್ಕ್ ಗಳನ್ನು ತೆರೆಯಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 104ಕ್ಕೆ ಕರೆ ಮಾಡಿ ಸಲಹೆಗಳನ್ನು ಪಡೆದು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಎಲ್ಲೆಡೆ ಶುಚಿತ್ವ ಕಾಪಾಡಿಕೊಳ್ಳುವುದು ನಮ್ಮೆಲ್ಲರ ಪ್ರಮುಖ ಆದ್ಯತೆಯಾಗಿದೆ. ಆದ್ದರಿಂದ ಎಲ್ಲರೂ ತಮ್ಮ ಮನೆಗಳು, ಸುತ್ತಮುತ್ತಮುತ್ತಲಿನ ಪ್ರದೇಶ, ಪಾದಚಾರಿ ಮಾರ್ಗಗಳು ಸೇರಿದಂತೆ ಇನ್ನಿತರೆ ಪ್ರದೇಶಗಳಲ್ಲಿ ಸ್ವಚ್ಛತೆ ಕಾಪಾಡುವ ಮೂಲಕ ರೋಗಗಳನ್ನು ಹೋಗಲಾಡಿಸಬಹುದಾಗಿದೆ. ಇದಕ್ಕೆ ಎಲ್ಲರೂ ಸಹಕರಿಸಬೇಕಿದೆ. ಪಾಲಿಕೆಯ ಆರೋಗ್ಯಾಧಿಕಾರಿಳು, ಮಾರ್ಷಲ್‌ಗಳು ಸ್ವಚ್ಛತೆ ಬಗ್ಗೆ ಹೆಚ್ಚು ಗಮನವರಿಸಿ ಬೆಂಗಳೂರುನ್ನು ಸುಂದರನಗರವನ್ನಾಗಿಸಿ ಎಂದರು.

ನಗರದಲ್ಲಿ ಕಾಲರಾ ರೋಗದ ಲಕ್ಷಣಗಳಿರುವ 17 ಪ್ರಕರಣಗಳು ಪತ್ತೆಯಾಗಿದ್ದು, ಈ ವಿಚಾರವಾಗಿ ಪಾಲಿಕೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ. ಈ ಸಂಬಂಧ ಆಯುಕ್ತರು ಜಲಮಂಡಳಿ ಅಧ್ಯಕ್ಷರ ಬಳಿ ಚರ್ಚಿಸಿದ್ದಾರೆ. ಅಲ್ಲದೆ ರಸ್ತೆ ಬದಿ, ಪಾದಚಾರಿ ಮಾರ್ಗ ಹಾಗೂ ತೆರದ ಪ್ರದೇಶಗಳಲ್ಲಿ ಹಣ್ಣು ಮಾರಾಟ ಮಾಡುವ ಬೀದಿ ವ್ಯಾಪಾರಿಗಳ ಮಳಿಗೆಗಳನ್ನು ತೆರವುಗೊಳಿಸಲು ಆಯುಕ್ತರು ಆದೇಶ ಹೊಡಿಸಿದ್ದಾರೆ ಎಂದು ತಿಳಿಸಿದರು.

**ಮಾನ್ಯ ಆಯುಕ್ತರು ರವರು ಮಾತನಾಡಿ,** ಕೊರೋನಾ ವೈರೆಸ್ ಸೋಂಕು ಹರಡದಿರಲು ಈಗಾಗಲೇ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಈಗಾಗಲೇ ಆರೋಗ್ಯಾಧಿಕಾರಿಗಳು, ಬೇರೆ ಬೇರೆ ಸಂಘಸಂಸ್ಥೆಗಳ ಜೊತೆ, ಮಾಲ್‌ಗಳು, ಐಟಿ-ಬಿಟಿ ಸಂಸ್ಥೆಗಳ ಸಭೆ ನಡೆಸಿ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚನೆ ನೀಡಲಾಗಿದೆ. ನಾಗರೀಕರು ಜನಸಾಂದ್ರತೆ ಆಗುವ ಕಾರ್ಯಕ್ರಮಗಳನ್ನು ಆದಷ್ಟು ದೂರವಿದ್ದರೆ ಒಳಿತು. ಈ ಬಗ್ಗೆ ಎಲ್ಲಾ ಕಡೆ ಮಾಹತಿ ನೀಡಲಾಗಿದೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಆರೋಗ್ಯಾಧಿಕಾರಿಗಳನ್ನು ನಿಯೋಜನೆ ಮಾಡಿದ್ದು, ಶಂಕಿತ ವ್ಯಕ್ತಿಗಳನ್ನು ತಪಸಾಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕೊರೋನಾ ವೈರೆಸ್ ಸೋಂಕು ತಡೆಯಲು ನ-97 ಮಾಸ್ಕ್ ಗಳನ್ನೇ ಬಳಸಬೇಕಿಲ್ಲ. ತ್ರಿಪಲ್ ಲೇಯರ್ ಮಾಸ್ಕ್‌ಗಳನ್ನು ಬಳಸಿದರೆ ಸಾಕು. ಯಾರಾದರು ಹೊರದೇಶಗಳಿಗೆ ಪ್ರಯಾಣ ಮಾಡಿದ್ದು, ರೋಗದ ಲಕ್ಷಣಗಳು ಕಂಡುಬಂದಲ್ಲಿ ಆಸ್ಪತ್ರೆಗಳಿಗೆ ಭೇಟಿ ನೀಡಿ ಮಾಹತಿ ಪಡೆಯಬಹುದು. ಇಲ್ಲವಾದಲ್ಲಿ ಸಹಾಯವಾಣಿ 104ಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ. ಅಲ್ಲದೆ ಪಾಲಿಕೆ ಆರೋಗ್ಯಾಧಿಕಾರಿಗಳ ತಂಡವು ಸ್ಥಳಕ್ಕೆ ಭೇಟಿ ನೀಡಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾಹಿತಿ ನೀಡಲಿದ್ದಾರೆ ಎಂದು ಹೇಳಿದರು.

ಕೊರೋನಾ ವೈರೆಸ್ ಸೋಂಕು ಸಾಮಾನ್ಯವಾಗಿ ಚಿಕ್ಕ ಮಕ್ಕಳು ಹಾಗೂ ಹಿರಿಯ ನಾಗರೀಕರಿಗೆ ಹರಡುವ ಪ್ರಮಾಣ ಹೆಚ್ಚಿದೆ. ಈ ಪರಿಣಾಮ ಮಾನ್ಯ ಶಿಕ್ಷಣ ಸಚಿವರು ಎಲ್.ಕೆ.ಜಿ ಮತ್ತು ಯು.ಕೆ.ಜಿ ಮಕ್ಕಳಿಗೆ ರಜೆ ಘೋಷಣೆ ಮಾಡಿರುವುದು ಒಳ್ಳೆಯದರು. ಹೋಳಿ ಹಬ್ಬವನ್ನು ಆಚರಣೆ ಮಾಡದೇ ಇರುವುದು ಒಳಿತು ಎಂದರು.

ನಗರದಲ್ಲಿ ಕಾಲರಾ ರೋಗ ಲಕ್ಷಣಗಳಿರುವ 17 ಪ್ರಕರಣಗಳನ್ನು ಗುರುತಿಸಲಾಗಿದೆ. ಕಾಲರಾ ಕಾಯಿಲೆ ಎಂದು ಖಚಿತಪಡಿಸಲು ಹಲವು ಪರೀಕ್ಷೆಗಳನ್ನು ಮಾಡಬೇಕಾಗುತ್ತದೆ. 17 ವ್ಯಕ್ತಿಗಳಲ್ಲಿ ಪ್ರಕರಣ ಕಂಡುಬಂದಿರುವುದರಿಂದ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದು, ಈಗಾಗಲೇ ಜಲಮಂಡಳಿ ಅಧ್ಯಕ್ಷರಿಗೆ ದೂರವಾಣಿ ಮೂಲಕ ಕರೆಮಾಡಿ ಕುಡಿಯುವ ಪೈಪ್ ಲೈನ್ ಮೂಲಕ ಬಿಡುತ್ತಿರುವ ನೀರಿನ್ನು ಪರೀಕ್ಷೆ ಮಾಡುವುದು, ಕುಡಿಯುವ ನೀರಿನ ವ್ಯವಸ್ಥೆಯನ್ನು ಟ್ಯಾಂಕರ್ ಮೂಲಕ ಒದಗಿಸುವುದು, ಆರೋಗ್ಯಾಧಿಕಾರಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ ಮತ್ತು ಪಿಜಿ ವಿದ್ಯಾರ್ಥಿಗಳು ಸೇರಿಕೊಂಡು ಆ ಪ್ರದೇಶಗಳಿಗೆ ತೆರಳಿ ಜನರಿಗೆ ನೀರನ್ನು ಕುಡಿಯುವ ಮುಂಚೆ ಕುದಿಸಿ ಕುಡಿಯಬೇಕೆಂದು ಅರಿವು ಮೂಡಿಸುವುದು. ಜೊತೆಗೆ ಕ್ಲೋರಿನ್ ಮಾತ್ರೆಗಳನ್ನು ವಿತರಣೆ ಮಾಡಲಿದ್ದಾರೆ.

ಜಲಮಂಡಳಿಯು ಈಗಾಗಲೇ ಲೀಕೇಜ್ ಆಗುವ ಜಾಗ ಗುರುತಿಸಲು ಮುಂದಾಗಿದ್ದಾರೆ. ಬೇಸಿಗೆ ಕಾಲದಲ್ಲಿ ಹೆಚ್ಚು ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಇದೆ. ಆದ್ದರಿಂದ ಕುಡಿಯುವ ನೀರಿನಲ್ಲಿ ಕ್ಲೋರಿನ್ ಪ್ರಮಾಣವನ್ನು ಹೆಚ್ಚಿಸಲು ಸೂಚಿಸಲಾಗಿದೆ ಎಂದರು.

**ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ಮಾತನಾಡಿ,** ಕಳೆದ ವಾರದಿಂದ ನಗರದ ದಕ್ಷಿಣ ವಲಯದಲ್ಲಿ 7, ಪೂರ್ವ ವಲಯದಲ್ಲಿ 8 ಹಾಗೂ ಪಶ್ಚಿಮ ವಲಯದಲ್ಲಿ 2 ಪ್ರಕರಣಗಳು ಸೇರಿದಂತೆ ಒಟ್ಟು 17 ಪ್ರಕರಣಗಳು ಪತ್ತೆಯಾಗಿವೆ. ಕಾಲರಾ ರೋಗ ಲಕ್ಷಣಗಳು ಪತ್ತೆಯಾದ ಪ್ರದೇಶಗಳಿಗೆ ಆರೋಗ್ಯಾಧಿಕಾರಿಗಳು ಭೇಟಿ ನೀಡಿ ನೀರಿನ ಮಾದರಿಯನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದ್ದು, ವರದಿಗೆ ಕಾಯುತ್ತಿದ್ದೇವೆ. ಕಾಲರಾ ಲಕ್ಷಣ ಕಂಡುಬಂದ 17 ಮಂದಿಯೂ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿ ಮಾನೆಗೆ ತೆರಳಿದ್ದಾರೆ ಎಂದು ತಿಳಿಸಿದರು.

ಕಾಲರಾ ರೋಗ ಲಕ್ಷಣಗಳು ಕಂಡುಬಂದ ಪ್ರದೇಶಗಳಲ್ಲಿ ಆರೋಗ್ಯಾಧಿಕಾರಿಗಳ ತಂಡವು ಸ್ಥಳಕ್ಕೆ ತೆರಳಿ ರೋಗಿಗಳನ್ನು ಮಾತನಾಡಿಸಿ, ಅವರು ಎಲ್ಲೆಲ್ಲಿ ಆಹಾರ ಸೇವಿಸಿದ್ದಾರೆ ಎಂಬುದನ್ನು ತಿಳಿದು ಅಲ್ಲಿ ನೀರಿನ ಮಾದರಿಯನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಜಲಮಂಡಳಿಯ ಆಯಾ ಪ್ರದೇಶದ ಕಾರ್ಯಪಾಲಕ ಅಭಿಯಂತರರಿಗೆ ಪತ್ರ ಬರೆದು ಲೀಕೇಜ್ ಇರುವುದನ್ನು ತಪಾಸಣೆ ನಡೆಸಲು ಸೂಚಿಸಲಾಗಿದೆ. ಜಲಮಂಡಳಿಯು ಈಗಾಗಲೇ ಸಂಚಾರಿ ವಾಹನದಲ್ಲಿ ಲೀಕೇಜ್ ಆಗುವ ಕಡೆ ಹಾಗೂ ಪ್ರಕರಣ ಕಂಡು ಪ್ರದೇಶದ ಕಡೆ ಬಂದು ನೀರಿನ ಮಾದರಿಯನ್ನು ಸಂಗ್ರಹಿಸುತ್ತಿದ್ದಾರೆ. ನಾಗರೀಕರು ಪಾದಚಾರಿ ಮಾರ್ಗ, ತೆರದ ಪ್ರದೇಶದಲ್ಲಿ ಮಾರಾಟ ಮಾಡುವ ಆಹಾರ ಪದಾರ್ಥಗಳು, ಹಣ್ಣುಗಳು, ಸಂಚಾರಿ ಕ್ಯಾಂಟೀನ್‌ಗಳಲ್ಲಿ ಆಹಾರ ಸೇವನೆ ಮಾಡಬಾರದು. ನೀರನ್ನು ಕುದಿಸಿ ಕುಡಿಯಬೇಕು. ಕಛೇರಿಗೆ ತೆರಳುವವರು ಮನೆಯಿಂದಲೇ ನೀರು ತೆಗದುಕೊಂಡು ಹೋಗುವುದು ಒಳಿತು ಎಂದು ತಿಳಿಸಿದರು.

**<u>ಕಾಲರಾ ರೋಗ ಲಕ್ಷಣ ಕಂಡು ಬಂದ ಪ್ರಕರಣಗಳು:</u>**

| **ದಕ್ಷಿಣ ವಲಯ [07 ಪ್ರಕರಣಗಳು]:** | **ಪೂರ್ವ ವಲಯ [08 ಪ್ರಕರಣಗಳು]:** | **ಪಶ್ಚಿಮ ವಲಯ [02 ಪ್ರಕರಣಗಳು]:** |
|---|---|---|
| ಬಸವನಗುಡಿ 2 | ನೀಲಸಂದ್ರ 4 | ಮಲ್ಲೇಶ್ವರಂ 1 |
| ಪದ್ಮನಾಭನಗರ 3 | ಸಗಾಯ್‌ಪುರ 1 | ಗೌರಿಪಾಳ್ಯ 1 |
| ವಿಜಯನಗರ 1 | ಆರ್.ಟಿ. ನಗರ 2 | |
| ಬಿಟಿಎಂ ಲೇಔಟ್ 1 | ಎಲ್.ಆರ್.ನಗರ್ 1 | |

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**